# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 647 (783) |
| ಮಾನ್ಯ ಸದಸ್ಯರ ಹೆಸರು | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 13/07/2023 |
| ಉತ್ತರಿಸುವ ಸಚಿವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಾರ್ಮಿಕರಿಗೆ ಸರ್ಕಾರದಿಂದ ನೀಡಲಾಗುವ ಸವಲತ್ತುಗಳೇನು; (ವಿವರ ನೀಡುವುದು) | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ, ಮಂಡಳಿಗಳು ಅನುಷ್ಠಾನಗೊಳಿಸುತ್ತಿರುವ ಯೋಜನೆ/ ಸವಲತ್ತುಗಳ ವಿವರಗಳು ಈ ಕೆಳಗಿನಂತಿವೆ.<br><br>**1. ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕ ಕಲ್ಯಾಣ ಮಂಡಳಿ.**<br><br>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ವತಿಯಿಂದ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ನೀಡಲಾಗುವ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳ ವಿವರವನ್ನು **ಅನುಬಂಧ ದಲ್ಲಿ** ಲಗತ್ತಿಸಿದೆ.<br><br>**2.ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ.**<br><br>**(ಅ) ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ:-** ಈ ಯೋಜನೆಯಡಿ ಕರ್ನಾಟಕ ರಾಜ್ಯದ ಸಾರಿಗೆ ಇಲಾಖೆಯಿಂದ ಕರ್ನಾಟಕ ರಾಜ್ಯದಲ್ಲಿ ವಾಣಿಜ್ಯ ಸಾರಿಗೆ ವಾಹನ ಚಲಾಯಿಸಲು ಊರ್ಜಿತ ಚಾಲನಾ ಪರವಾನಗಿ ಪಡೆದ ಎಲ್ಲಾ ಚಾಲಕರು ತಕ್ಷಣದಿಂದ ಫಲಾನುಭವಿಯೆಂದು ಪರಿಗಣಿಸುತ್ತಿದ್ದು, ಯೋಜನೆಯಡಿ ಪ್ರತ್ಯೇಕ ನೋಂದಣಿಯ ಅವಶ್ಯಕತೆ ಇರುವುದಿಲ್ಲ.<br><br>ಸದರಿ ವಾಹನಗಳ ನಿರ್ವಾಹಕರಿಗೆ ಹಾಗೂ ಕ್ಲೀನರುಗಳಿಗೆ ಯೋಜನೆಯಡಿ ನಿಯಮಾನುಸಾರ ಕಾರ್ಮಿಕ ಇಲಾಖೆಯಲ್ಲಿ ನೋಂದಾಯಿಸಲಾಗುವುದು. |

| | | |
|---|---|---|
| | | **ಆ) ಅಪಘಾತ ಪರಿಹಾರ ಸೌಲಭ್ಯ:**<br>ಈ ಯೋಜನೆಯಡಿ, ಅಪಘಾತದಿಂದ ಮರಣ ಹೊಂದಿದ ಪ್ರಕರಣಗಳಲ್ಲಿ ನಾಮನಿರ್ದೇಶಿತರಿಗೆ ರೂ.5.00 ಲಕ್ಷದ ಪರಿಹಾರ, ಸಂಪೂರ್ಣ ಶಾಶ್ವತ ದುರ್ಬಲತೆ ಪ್ರಕರಣಗಳಲ್ಲಿ ಫಲಾನುಭವಿಗೆ ರೂ.2.00 ಲಕ್ಷದವರೆಗೆ ಪರಿಹಾರ ಮತ್ತು ಒಳರೋಗಿಯಾಗಿ ಚಿಕಿತ್ಸೆ ಪಡೆದಲ್ಲಿ ರೂ.1.00 ಲಕ್ಷದವರೆಗೆ ಚಿಕಿತ್ಸಾ ವೆಚ್ಚದ ಮರುಪಾವತಿ ನೀಡಲಾಗುತ್ತಿದೆ.<br>**(ಇ) ಶೈಕ್ಷಣಿಕ ಧನ ಸಹಾಯ:**<br>ಅಪಘಾತದಿಂದ ನಿಧನರಾದ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಗಳ ಗರಿಷ್ಠ ಇಬ್ಬರು ಮಕ್ಕಳಿಗೆ ಒಂದನೇ ತರಗತಿಯಿಂದ ಪದವಿ ಪೂರ್ವ ವ್ಯಾಸಂಗದವರೆಗೆ ವಾರ್ಷಿಕ ತಲಾ ರೂ.10,000/-ಗಳ ಶೈಕ್ಷಣಿಕ ಸಹಾಯಧನ ನೀಡಲಾಗುತ್ತಿದೆ.<br>**(ಈ) ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:**<br>ಈ ಯೋಜನೆಯಡಿ 11 ಅಸಂಘಟಿತ ವರ್ಗಗಳಾದ "ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಟೈಲರ್, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕರನ್ನು ಆನ್‌ಲೈನ್ ಮೂಲಕ ಉಚಿತವಾಗಿ ನೋಂದಾಯಿಸಿ ಗುರುತಿನ ಚೀಟಿ ವಿತರಿಸಲಾಗುತ್ತಿದ್ದು, ಈ ಯೋಜನೆಯಡಿ ಪ್ರಸ್ತುತ ಯಾವುದೇ ಆರ್ಥಿಕ ಸೌಲಭ್ಯಗಳನ್ನು ಒದಗಿಸುತ್ತಿಲ್ಲ.<br>**(ಉ) ಇ-ಶ್ರಮ್ ಕಾರ್ಯಕ್ರಮ (ಅಸಂಘಟಿತ ಕಾರ್ಮಿಕರ ನೋಂದಣಿ):**<br>ಕೇಂದ್ರ ಸರ್ಕಾರದ ಕಾರ್ಮಿಕ ಮತ್ತು ಉದ್ಯೋಗ ಮಂತ್ರಾಲಯವು ಅಸಂಘಟಿತ ಕಾರ್ಮಿಕರ ದತ್ತಾಂಶವನ್ನು ಸಂಗ್ರಹಿಸುವ ಉದ್ದೇಶದಿಂದ, ಇ-ಶ್ರಮ್ ಪೋರ್ಟಲ್ ಅನ್ನು ಅಭಿವೃದ್ಧಿಪಡಿಸಿದ್ದು, ಯೋಜನೆಯಡಿ 16-59 ವಯೋಮಾನದ ಇ.ಎಸ್.ಐ ಹಾಗೂ ಇ.ಪಿ.ಎಫ್ ಸೌಲಭ್ಯವನ್ನು ಹೊಂದಿರದ ಹಾಗೂ ಆದಾಯ ತೆರಿಗೆ ಪಾವತಿ ಮಾಡದ ಎಲ್ಲಾ ಅಸಂಘಟಿತ ಕಾರ್ಮಿಕರನ್ನು ನೋಂದಾಯಿಸುತ್ತಿದ್ದು, ಅವರು ಸಾಮಾನ್ಯ ಸೇವಾ ಕೇಂದ್ರ/ ಬೆಂಗಳೂರು ಒನ್/ ಗ್ರಾಮ್ ಒನ್ ಮೂಲಕ ಅಥವಾ ಸ್ವಯಂ ಆಗಿ ಇ-ಶ್ರಮ್ ಪೋರ್ಟಲ್‌ನಲ್ಲಿ (eshram.gov.in) ಉಚಿತವಾಗಿ ನೋಂದಾಯಿಸಲಾಗುತ್ತಿದ್ದು, ಸ್ಥಳದಲ್ಲೇ ಗುರುತಿನ ಚೀಟಿಯನ್ನು ವಿತರಿಸಲಾಗುತ್ತಿದೆ. |

| | | |
|---|---|---|
| | | ಸದರಿ ಕಾರ್ಮಿಕರು ಒಂದು ವರ್ಷಕ್ಕೆ ಪ್ರಧಾನಮಂತ್ರಿ ಸುರಕ್ಷಾ ಬಿಮಾ ಯೋಜನೆ (PM-SBY) (ಅಪಘಾತ ಅಥವಾ ಶಾಶ್ವತ ದುರ್ಬಲತೆ ಹೊಂದಿದಲ್ಲಿ ರೂ.2.00 ಲಕ್ಷ ಹಾಗೂ ಭಾಗಶಃ ಅಂಗವೈಕಲ್ಯಕ್ಕೆ ರೂ.1.00 ಲಕ್ಷ ಪರಿಹಾರ)ಗಳ ವರೆಗೆ ಪ್ರಯೋಜನ ಪಡೆಯಬಹುದು.<br><br>**3. ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯಿಂದ ಕಾರ್ಮಿಕರಿಗೆ ಈ ಕೆಳಕಂಡ ಸವಲತ್ತುಗಳನ್ನು ಒದಗಿಸುತ್ತಿವೆ.**<br><br>ಪ್ರತಿ ಕಾರ್ಮಿಕರಿಂದ ರೂ.20/- ಮತ್ತು ಪ್ರತಿ ಕಾರ್ಮಿಕರಿಗೆ ಮಾಲೀಕರಿಂದ ರೂ.40/-ರಂತೆ ಹಾಗೂ ಸರ್ಕಾರದಿಂದ ಪ್ರತಿ ಕಾರ್ಮಿಕರಿಗೆ ರೂ.20/- ರಂತೆ ಸಹಾಯಾನುದಾನವನ್ನು ವಂತಿಗೆಯಾಗಿ ನೀಡಲಾಗುತ್ತಿದೆ. ಈ ವಂತಿಗೆಯ ಮೊತ್ತವನ್ನು ಸಂಘಟಿತ ಕಾರ್ಮಿಕರಿಗೆ ಕಲ್ಯಾಣ ಯೋಜನೆಗಳಡಿ ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿದೆ.<br><br>1. ಕಾರ್ಮಿಕರ ಒಬ್ಬ ಮಗುವಿಗೆ ಶೈಕ್ಷಣಿಕ ಪ್ರೋತ್ಸಾಹ ಧನಸಹಾಯ.<br>2. ಕಾರ್ಮಿಕರಿಗೆ ವೈದ್ಯಕೀಯ ನೆರವು.<br>3. ಕಾರ್ಮಿಕರಿಗೆ ಅಪಘಾತ ಧನಸಹಾಯ.<br>4. ಮಹಿಳಾ ಕಾರ್ಮಿಕರಿಗೆ ಹೆರಿಗೆ ಭತ್ಯೆ ಸೌಲಭ್ಯ.<br>5. ಮೃತ ಕಾರ್ಮಿಕನ ಅಂತ್ಯಸಂಸ್ಕಾರಕ್ಕೆ ಧನಸಹಾಯ.<br>6. ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರ ಹಮ್ಮಿಕೊಳ್ಳುವ ಟ್ರೇಡ್ ಯೂನಿಯನ್/ ಸಂಸ್ಥೆಗಳಿಗೆ ಧನಸಹಾಯ.<br>7. ವಾರ್ಷಿಕ ಕ್ರೀಡಾಕೂಟ ಹಮ್ಮಿಕೊಳ್ಳುವ ನೊಂದಾಯಿತ ಕಾರ್ಮಿಕ ಸಂಘಗಳಿಗೆ ಧನಸಹಾಯ. |
| ಆ) | ಬೀಡಿ ಕಾರ್ಮಿಕರಿಗೆ ನೀಡಲಾಗುವ ಸವಲತ್ತುಗಳೇನು; | **ಬೀಡಿ ಕಾರ್ಮಿಕರಿಗೆ ಸರ್ಕಾರವು ಈ ಕೆಳಕಂಡ ಸವಲತ್ತುಗಳನ್ನು ನೀಡಲಾಗುತ್ತಿದೆ.**<br>1. ಬೀಡಿ ಕಾರ್ಮಿಕರಿಗೆ ರಾಜ್ಯ ಸರ್ಕಾರ ನಿಗಧಿಪಡಿಸಿದ ಕನಿಷ್ಠ ವೇತನವನ್ನು ಪಾವತಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗುತ್ತಿದ್ದು, ಸಂಸ್ಥೆಯ ಮಾಲೀಕರಿಗೂ ಸಹ ಕನಿಷ್ಠ ವೇತನವನ್ನು ಪಾವತಿಸುವಂತೆ ಮಾಹಿತಿ ನೀಡಲಾಗುತ್ತಿದೆ.<br>2. ಇ.ಎಸ್.ಐ ಮತ್ತು ಪಿ.ಎಫ್. ಸೌಲಭ್ಯವನ್ನು ಮಾಲೀಕರು ನೀಡಲಾಗುತ್ತಿದೆಯೇ ಇಲ್ಲವೆ ಎಂಬ ಬಗ್ಗೆ ಪರಿಶೀಲನೆ ನಡೆಸಲಾಗುತ್ತಿದೆ. |

| | | |
|---|---|---|
| | | 3. ಭಾರತ ಸರ್ಕಾರವು ಕಾರ್ಮಿಕ ಕಲ್ಯಾಣ ಮಂಡಳಿಯ ಮೂಲಕ ಬೀಡಿ ಕಾರ್ಮಿಕರಿಗೆ ಆರೋಗ್ಯ ಸೌಲಭ್ಯಗಳು, ಸಾಮಾಜಿಕ ಭದ್ರತೆ, ಶೈಕ್ಷಣಿಕ ಮತ್ತು ವಸತಿ ಸೌಲಭ್ಯಗಳನ್ನು ನೀಡುತ್ತಿದೆ. |
| ಇ) | ಬೀಡಿ ಕಾರ್ಮಿಕರಿಗೆ ಇನ್ನು ಹೆಚ್ಚಿನ ಸವಲತ್ತುಗಳನ್ನು ನೀಡಲು ಚಿಂತಿಸಲಾಗುವುದೆ; | ಪ್ರಸ್ತುತ ಯಾವುದೇ ಪ್ರಸ್ತಾವನೆ ಇರುವುದಿಲ್ಲ. |
| ಈ) | ಹಾಗಿದ್ದಲ್ಲಿ, ಈ ಸಂಬಂಧ ಸರ್ಕಾರ ತೆಗೆದುಕೊಂಡ ಕ್ರಮಗಳೇನು? | ಅನ್ವಯಿಸುವುದಿಲ್ಲ. |

**ಕಾಇ 299 ಎಲ್ ಇಟಿ 2023**

(ಸಂತೋಷ್ ಎಸ್. ಲಾಡ್)
**ಕಾರ್ಮಿಕ ಸಚಿವರು**

## : ಅನುಬಂಧ :

## ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯವತಿಯಿಂದ ನೋಂದಾಯಿತ ಫಲಾನುಭವಿಗಳಿಗೆ ಸಹಾಯಧನ ನೀಡಲು ಈ ಕೆಳಕಂಡ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ರೂಪಿಸಲಾಗಿದೆ:

1. **ಪಿಂಚಣಿ ಸೌಲಭ್ಯ:** ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆ ಮಾಸಿಕ **ರೂ.3,000/-**ಗಳು
2. **ಕುಟುಂಬ ಪಿಂಚಣಿ ಸೌಲಭ್ಯ:** ಮೃತ ಪಿಂಚಣಿದಾರರ ಪತಿ/ಪತ್ನಿಮಾಸಿಕ **ರೂ.1500/-**ಗಳು
3. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾ ಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ /ಭಾಗಶಃ ಅಂಗ ವಿಕಲತೆ ಹೊಂದಿದ್ದರೆ ಮಾಸಿಕ **ರೂ.2,000/-**ಗಳ ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ **ರೂ. 2,00,000/-**ಗಳವರೆಗೆ ಅನುಗ್ರಹರಾಶಿ ಸಹಾಯಧನ.
4. **ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ** ಮರುಪಾವತಿ ಸೌಲಭ್ಯ (ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ).
5. **ಟ್ರೈನಿಂಗ್-ಕಮ್-ಟೂಲ್‌ಕಿಟ್ಸ್ ಸೌಲಭ್ಯ (ಶ್ರಮ ಸಾಮರ್ಥ್ಯ): ರೂ.30,000/-ಗಳವರೆಗೆ**
6. **ವಸತಿ ಸೌಲಭ್ಯ (ಕಾರ್ಮಿಕ ಗೃಹ ಭಾಗ್ಯ): ರೂ.2,00,000/-**ಗಳ ವರೆಗೆ ಮುಂಗಡ ಸೌಲಭ್ಯ.
7. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀಬಾಂಡ್):** ಮಹಿಳಾ ಫಲಾನುಭವಿಯ ಮೊದಲ ಎರಡು ಮಗುವಿನ ಜನನಕ್ಕೆ ರೂ.50,000/-ಗಳು.
8. **ಶಿಶುಪಾಲನಾ ಸೌಲಭ್ಯ: 06 ತಿಂಗಳಿನಿಂದ 06 ವರ್ಷ್ದ ಮಕ್ಕಳ ಲಾಲನೆ ಪಾಲನೆಗಾಗಿ ಶಿಶುಪಾಲನಾ ಕೇಂದ್ರಗಳ ಸ್ಥಾಪನೆ.**
9. **ಅಂತ್ಯಕ್ರಿಯೆ ವೆಚ್ಚ :ರೂ.4,000/-ಗಳು** ಹಾಗೂ ಅನುಗ್ರಹ ರಾಶಿ **ರೂ. 71,000/-**ಗಳವರೆಗೆ ಸಹಾಯಧನ.
10. **ಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ): ಫಲಾನುಭವಿಯ ಇಬ್ಬರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ:**

| ಕ್ರ ಸಂ | ತರಗತಿ (ಉತ್ತೀರ್ಣಕ್ಕೆ) | |
|---|---|---|
| 1 | ಕೆಜಿ/ ಪೂರ್ವಶಾಲೆ /ನರ್ಸರಿ (ವರ್ಷ 3 ರಿಂದ 5) | 5,000 |
| 2 | 1 ರಿಂದ 4ನೇ ತರಗತಿ | 5,000 |
| 3 | 5 ರಿಂದ 8ನೇ ತರಗತಿ | 8,000 |
| 4 | 9 ಹಾಗೂ 10ನೇ ತರಗತಿ | 12,000 |
| | **ಪದವಿಪೂರ್ವ** | |
| 5 | ಪ್ರಥಮ ಪಿಯುಸಿ ಮತ್ತು ದ್ವಿತೀಯ ಪಿ.ಯು.ಸಿ | 15,000 |
| 6 | ಪಾಲಿಟೆಕ್ನಿಕ್ / ಡಿಪ್ಲೋಮ/ ಐಟಿಐ | 20,000 |
| 7 | ಬಿಎಸ್‌ಸಿ ನರ್ಸಿಂಗ್/ ಜಿಎನ್‌ಎಮ್/ ಎಎನ್‌ಎಮ್/ ಪಾರಮೆಡಿಕಲ್ ಕೋರ್ಸ್ | 40,000 |
| 8 | ಡಿ.ಎಡ್ | 25,000 |
| 9 | ಬಿ.ಎಡ್ | 35,000 |
| 10 | ಪದವಿ ಪ್ರತಿ ವರ್ಷಕ್ಕೆ (ಯಾವುದೇ ಪದವಿ) | 25,000 |
| 11 | ಎಲ್‌ಎಲ್ ಬಿ/ಎಲ್ ಎಲ್ ಎಂ | 30,000 |
| 12 | ಸ್ನಾತ್ತಕೋತ್ತರ ಪದವಿ ಪ್ರತಿ ವರ್ಷಕ್ಕೆ (ಯಾವುದೇ ಪದವಿ) | 35,000 ಗರಿಷ್ಠ 2 ವರ್ಷ ಅವಧಿಗೆ ಒಳಪಟ್ಟು |
| **ತಾಂತ್ರಿಕ/ ವೈದ್ಯಕೀಯ ಎನ್‌ಇಇಟಿ ಅಥವಾ ಕೆಸಿಇಟಿ** | | |
| 13 | ಬಿಇ/ಬಿ.ಟೆಕ್ ಅಥವಾ ಸಂಬಂಧಪಟ್ಟ ಯುಜಿ ಕೋರ್ಸ್ | ಸದರಿ ಕೋರ್ಸ ಗರಿಷ್ಠ 2 ವರ್ಷ ಅವಧಿಗೆ ಒಳಪಟ್ಟು ವಾರ್ಷಿಕ ರೂ. 50,000/- |
| 14 | ಎಮ್.ಟೆಕ್/ ಎಮ್ ಇ (ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕ್ಕೊತ್ತರ ಕೋರ್ಸ್) | ಸದರಿ ಕೋರ್ಸ ಗರಿಷ್ಠ ಅವಧಿಗೆ ಒಳಪಟ್ಟು ವಾರ್ಷಿಕ ರೂ. 60,000/- |
| 15 | ವೈದ್ಯಕೀಯ (ಎಮ್‌ಬಿಬಿಎಸ್ /ಬಿಎಎಮ್ ಎಸ್/ ಬಿಡಿಎಸ್ /ಬಿಹೆಚ್‌ಎಮ್ ಎಸ್ಕೋರ್ಸ್ ಅಥವಾ ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕ್ಕೊತ್ತರ ಕೋರ್ಸ್ | ರೂ. 60,000 (ಸದರಿ ಕೋರ್ಸ ಗರಿಷ್ಠ ಅವಧಿಗೆ ಒಳಪಟ್ಟು ) |
| | ಎಮ್‌ಡಿ | ರೂ.75,000/-ಗಳು (ಸದರಿ ಕೋರ್ಸ ಗರಿಷ್ಠ ಅವಧಿಗೆ ಒಳಪಟ್ಟು) |

| ಕ್ರ ಸಂ | ತರಗತಿ (ಉತ್ತೀರ್ಣಕ್ಕೆ) | |
|---|---|---|
| 16 | ಪಿಹೆಚ್‌ಡಿ / ಎಮ್. ಫಿಲ್ (ಯಾವುದೇ ವಿಷಯ) | ಪಿಹೆಚ್‌ಡಿಗೆ ಗರಿಷ್ಠ ಮೂರು ವರ್ಷಗಳಿಗೆ ಹಾಗೂ ಎಮ್‌ಫಿಲ್‌ಗೆ 1 ವರ್ಷಕ್ಕೆ ಪ್ರತಿ ವರ್ಷರೂ. 25,000 (ಯುಜಿಸಿಯ ಜೂನಿಯರ್ ಸ್ಕಾಲರ್ ಶಿಪ್ ಗೆ ಆಯ್ಕೆ ಯಾಗಿರುವ ಅಭ್ಯರ್ಥಿ ಗಳು ಹಾಗೂ ಕೇಂದ್ರ ಮತ್ತು ರಾಜ್ಯ ಸರ್ಕಾರದಲ್ಲಿ ಕೆಲಸ ನಿರ್ವಹಿಸುತ್ತಿರುವ ಅಭ್ಯರ್ಥಿ ಗಳು ಹಾಗೂ ಯುಜಿಸಿ ನಿಯಮಗಳನ್ವಯ ವೇತನ ಅನುದಾನಕ್ಕೆ ಒಳಪಡುವ ಹುದ್ದೆಗಳಲ್ಲಿ<br>ಅನುದಾನಿತ ಕಾಲೇಜುಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಅಭ್ಯರ್ಥಿಗಳು ಈ ಸೌಲಭ್ಯವನ್ನು ಪಡೆಯಲು ಅರ್ಹರಿರುವುದಿಲ್ಲ. |
| 17 | ಐಐಟಿ/ಐಐಐಟಿ/ ಐಐಎಮ್/ ಎನ್‌ಐಟಿ/ ಐಐಎಸ್‌ಇಆರ್/ಎಐಐಎಮ್‌ಎಸ್/ಎನ್ ಎಲ್‌ಯೂ ಮತ್ತು ಭಾರತ ಸರ್ಕಾರದ ಮಾನ್ಯತೆ ಪಡೆದ ಕೋರ್ಸುಗಳು. | ಪಾವತಿಸಿದ ಬೋದನಾ ಶುಲ್ಕ |

11. **ವೈದ್ಯಕೀಯ ಸಹಾಯ ಧನ (ಕಾರ್ಮಿಕ ಆರೋಗ್ಯ ಭಾಗ್ಯ):** ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಭಿತರಿಗೆ **ರೂ.300/-** ರಿಂದ **ರೂ. 20,000/-**ಗಳವರೆಗೆ
12. **ಅಪಘಾತ ಪರಿಹಾರ:** ಮರಣ ಹೊಂದಿದ್ದಲ್ಲಿ **ರೂ.5,00,000/-**ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ **ರೂ.2,00,000/-**ಗಳು
13. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ):** ಹೃದ್ರೋಗ, ಕಿಡ್ನಿ ಜೋಡಣೆ, ಕ್ಯಾನ್ಸರ ಚಿಕಿತ್ಸೆ, ಕಣ್ಣಿನ ಶಸ್ತ್ರ ಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರ ಚಿಕಿತ್ಸೆ, ಅಸ್ತಮ ಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದ ತೊಂದರೆಗೆ ಸಂಬಂಧಿತ ಚಿಕಿತ್ಸೆ, ಮೂತ್ರಪಿಂಡದಲ್ಲಿನ ಕಲ್ಲು ತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತ ಸ್ರಾವದ ಚಿಕಿತ್ಸೆ, ಅಲ್ಸರ ಚಿಕಿತ್ಸೆ, ಡಯಾಲಿಸಿ ಚಿಕಿತ್ಸೆ, ಕಿಡ್ನಿಶಸ್ ಚಿಕಿತ್ಸೆ, ಇ.ಎನ್.ಟಿ ಚಿಕಿತ್ಸೆ, ಶಸ್ತ್ರ ಚಿಕಿತ್ಸೆ, ನರರೋಗ ಶಸ್ತ್ರ ಚಿಕಿತ್ಸೆ, ವ್ಯಾಸ್ಕೂಲರ್‌ಯಲ ಶಸ್ತ್ರ ಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರ ಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರ ಚಿಕಿತ್ಸೆ, ಹರ್ನಿಯ ಶಸ್ತ್ರ ಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರ ಚಿಕಿತ್ಸೆ, ಮೂಳೆಮುರಿತ/ ಡಿಸ್

ಲೊಕೇಶನ್ ಚಿಕಿತ್ಸೆ, ಇತರೆ ಔಧ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-**ಗಳವರೆಗೆ

14. **ಮದುವೆ ಸಹಾಯ ಧನ (ಗೃಹ ಲಕ್ಷ್ಮೀ ಬಾಂಡ್):** ಫಲಾನುಭವಿ ಅಥವಾ ಅವರ ಇಬ್ಬರು ಮಕ್ಕಳ ಮದುವೆಗೆ **ತಲಾ ರೂ.60,000/-**

15. **ತಾಯಿ ಮಗು ಸಹಾಯ ಹಸ್ತ:** ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ **ರೂ. 6,000/- ಗಳ** ಸಹಾಯಧನ.